# Bangalore
# Regional News
# 19.02.2026 / 6.40 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಮುಷ್ಕರ ಹಿಂಪಡೆದ ರಾಜ್ಯ ಸಾರಿಗೆ ನೌಕರರು; ಬೇಡಿಕೆ ಈಡೇರಿಸುವಂತೆ ಸರ್ಕಾರಕ್ಕೆ ಮಾರ್ಚ್ 2ರವರೆಗೆ ಗಡುವು
2. ಜಿಬಿಎ ವ್ಯಾಪ್ತಿಯ ಮತದಾರರ ಪಟ್ಟಿಯಲ್ಲಿ ಲೋಪ; ಬೀದಿ, ಮನೆ ಮ್ಯಾಪಿಂಗ್ ನಡೆಸುವಂತೆ ರಾಜ್ಯ ಚುನಾವಣಾ ಆಯೋಗಕ್ಕೆ ಉಪಮುಖ್ಯಮಂತ್ರಿ ಪತ್ರ
3. ರಾಜ್ಯದಲ್ಲಿ ಆರೋಗ್ಯ ಸೇವೆ ವ್ಯತ್ಯಯ; ಸಚಿವ ದಿನೇಶ್ ಗುಂಡೂರಾವ್ ರಾಜೀನಾಮೆಗೆ ಬಿಜೆಪಿ ಆಗ್ರಹ
4. ಬಿಜೆಪಿ ರಾಜ್ಯ ಕಾರ್ಯಕಾರಿಣಿಗೆ ಕೇಂದ್ರ ಸಚಿವ ಗಜೇಂದ್ರ ಸಿಂಗ್ ಶೆಖಾವತ್ ಚಾಲನೆ; ಪಕ್ಷವನ್ನು ಮರಳಿ ಅಧಿಕಾರಕ್ಕೆ ತರುವಂತೆ ಕರೆ
5. ರಣಜಿ ಸೆಮಿಫೈನಲ್ ಹಣಾಹಣಿ; ಉತ್ತರಾಖಂಡ್ ವಿರುದ್ಧದ ಪಂದ್ಯ ಡ್ರಾನಲ್ಲಿ ಅಂತ್ಯ; ಫೈನಲ್ ಪ್ರವೇಶಿಸಿದ ಕರ್ನಾಟಕ

****************

ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ 'ಬೆಂಗಳೂರು ಚಲೋ ಹಮ್ಮಿಕೊಂಡಿದ್ದ ಕರ್ನಾಟಕ ರಾಜ್ಯ ಸಾರಿಗೆ ನೌಕರರು ಮುಷ್ಕರವನ್ನು ತಾತ್ಕಾಲಿಕವಾಗಿ ಹಿಂಪಡೆದಿದ್ದಾರೆ. ರಾಜ್ಯ ಸರ್ಕಾರದ ವೇತನ ಪರಿಷ್ಕರಣೆ ಆದೇಶ ಹಾಗೂ ಹಲವು ತಿಂಗಳ ಹಿಂಬಾಕಿ ನೀಡಲು ನೌಕರರು ಮಾರ್ಚ್ 2ರವರೆಗೆ ಸರ್ಕಾರಕ್ಕೆ ಗಡುವು ನೀಡಿದ್ದಾರೆ.

38 ತಿಂಗಳ ಹಿಂಬಾಕಿ ಪೈಕಿ 26 ತಿಂಗಳ ಹಿಂಬಾಕಿ ನೀಡುವುದಾಗಿ ಸರ್ಕಾರ ನಿರ್ಧಾರ ತೆಗೆದುಕೊಂಡಿದೆ. ಅಲ್ಲದೇ ವೇತನ ಪರಿಷ್ಕರಣೆಗೂ ಸರ್ಕಾರ ಒಪ್ಪಿಕೊಂಡಿದೆ. ಆದರೆ 38 ತಿಂಗಳ ಹಿಂಬಾಕಿ ಹಣ ನೀಡಬೇಕೆಂದು ನೌಕರರು ಪಟ್ಟು ಹಿಡಿದಿದ್ದಾರೆ.

ಕೆಎಸ್‌ಆರ್‌ಟಿಸಿ ನಿರ್ದೇಶಕ ಅಂಜುಂ ಪರ್ವೇಜ್, ಫ್ರೀಡಂಪಾರ್ಕ್‌ನಲ್ಲಿ ನಡೆಯುತ್ತಿದ್ದ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ ನೌಕರರ ಜತೆ ಚರ್ಚಿಸಿದರು. ಬಳಿಕ ನೌಕರರು ಮುಷ್ಕರವನ್ನು ತಾತ್ಕಾಲಿಕವಾಗಿ ಹಿಂಪಡೆದುಕೊಂಡಿದ್ದು ನಾಳೆಯಿಂದ ಮುಷ್ಕರ ನಡೆಸದಿರಲು ಜಂಟಿ ಕ್ರಿಯಾ ಸಮಿತಿ ನಿರ್ಧರಿಸಿದೆ. ಮಾರ್ಚ್ 2ರವರೆಗೆ ಬೇಡಿಕೆ ಈಡೇರದಿದ್ದರೆ ಮುಷ್ಕರ ನಡೆಸುವುದಾಗಿ ನೌಕರರು ಎಚ್ಚರಿಕೆ ನೀಡಿದ್ದಾರೆ.

****************

ಗ್ರೇಟರ್ ಬೆಂಗಳೂರು ವ್ಯಾಪ್ತಿಯ ಅನೇಕ ಕಡೆಗಳಲ್ಲಿ ಚುನಾವಣಾ ಮತದಾರರ ಪಟ್ಟಿಯಲ್ಲಿ ಲೋಪದೋಷಗಳು ಕಂಡು ಬಂದಿರುವ ಹಿನ್ನೆಲೆಯಲ್ಲಿ ಇದನ್ನು ಸರಿಪಡಿಸಲು ಬೀದಿವಾರು, ಮನೆವಾರು ಮ್ಯಾಪಿಂಗ್ ಮಾಡಿ" ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ರಾಜ್ಯ ಚುನಾವಣಾ ಆಯೋಗಕ್ಕೆ ಪತ್ರ ಬರೆದಿದ್ದಾರೆ.

ಒಂದೇ ಕುಟುಂಬದ ಮತದಾರರನ್ನು ಬೇರೆ ಬೇರೆ ಮತಗಟ್ಟೆಗಳು ಹಾಗೂ ಬೇರೆ ವಾರ್ಡ್‌ಗಳಿಗೆ ವಿಂಗಡಿಸಲಾಗಿದೆ. ಕೆಲವರ ಹೆಸರುಗಳು ಮತದಾರರ ಪಟ್ಟಿಯಿಂದ ನಾಪತ್ತೆಯಾಗಿದ್ದು, ಮತದಾರರ ವಿಳಾಸ ಸರಿಯಾಗಿದ್ದರೂ, ಬೇರೆ ವಾರ್ಡ್‌ಗಳಲ್ಲಿ ಸೇರಿಸಲಾಗಿದೆ ಎಂದು ತಿಳಿಸಿದ್ದಾರೆ.

ಅರ್ಹ ಮತದಾರರು ಮತದಾನದ ಅವಕಾಶದಿಂದ ವಂಚಿತರಾಗದಂತೆ ನೋಡಿಕೊಳ್ಳಲು ಚುನಾವಣಾ ಆಯೋಗವು ವಿಶೇಷವಾಗಿ ಪರಿಷ್ಕರಣಾ ಅಭಿಯಾನ ನಡೆಸಬೇಕು ಎಂದು ಒತ್ತಾಯಿಸಿದ್ದಾರೆ.

****************

ರಾಜ್ಯದ ಆರೋಗ್ಯ ರಕ್ಷಣಾ ವ್ಯವಸ್ಥೆ ಕುಸಿಯುತ್ತಿದ್ದು, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ರಾಜೀನಾಮೆ ನೀಡುವಂತೆ ಪ್ರತಿಪಕ್ಷ ನಾಯಕ ಆರ್. ಅಶೋಕ ಆಗ್ರಹಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ಮೂರು ವರ್ಷಗಳಿಂದ ಸಿಟಿ ಮತ್ತು ಎಂಆರ್‌ಐ ಸೇವಾ ಪೂರೈಕೆದಾರರಿಗೆ 143.7 ಕೋಟಿ ರೂಪಾಯಿಗಳನ್ನು ಪಾವತಿಸಲು ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದ್ದಾರೆ.

ಸರ್ಕಾರದ ನಿರ್ಲಕ್ಷ್ಯದಿಂದಾಗಿ ಆರೋಗ್ಯ ಸೇವೆ ಅಪಾಯದಲ್ಲಿದೆ. ಬಡ ಮತ್ತು ಮಧ್ಯಮ ವರ್ಗದ ರೋಗಿಗಳು, ಅಪಘಾತಕ್ಕೀಡಾದವರು, ಕ್ಯಾನ್ಸರ್ ರೋಗಿಗಳು, ಪಾರ್ಶ್ವವಾಯು ಪೀಡಿತರು, ತುರ್ತು ಸ್ಕ್ಯಾನ್‌ಗಳ ಅಗತ್ಯವಿರುವ ಗರ್ಭಿಣಿಯರಿಗೆ ಸಮಸ್ಯೆ ಉಂಟಾಗಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

****************

ರಾಜ್ಯದಲ್ಲಿ 2028ರಲ್ಲಿ ಬಿಜೆಪಿ ಮತ್ತೆ ಅಧಿಕಾರಕ್ಕೆ ಬರಲಿದೆ ಎಂದು ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ ಭಾರತೀಯ ಜನತಾ ಪಕ್ಷದ ರಾಜ್ಯ ಕಾರ್ಯಕಾರಿಣಿ ಉದ್ಘಾಟಿಸಿದ ಅವರು ರಾಜ್ಯದಲ್ಲಿ ಮರಳಿ ಅಧಿಕಾರ ಪಡೆಯುವ ಸಂಕಲ್ಪ ಮಾಡುವಂತೆ ಕಾರ್ಯಕರ್ತರಿಗೆ ಕರೆ ನೀಡಿದ್ದಾರೆ. ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದೆ ಎಂದು ಅವರು ಆರೋಪಿಸಿದ್ದಾರೆ.
ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಮಾತನಾಡಿ, ರಾಜ್ಯದಲ್ಲಿ ಬಿಜೆಪಿಯ ಗತವೈಭವವನ್ನು ಪುನಃಸ್ಥಾಪಿಸಲು ಪಕ್ಷದ ಕಾರ್ಯಕರ್ತರು ಹಗಲಿರುಳು ಶ್ರಮಿಸಬೇಕು ಎಂದು ಹೇಳಿದ್ದಾರೆ. ಕೇಂದ್ರ ಚುನಾವಣಾ ಆಯೋಗ ನಡೆಸುತ್ತಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಬಗ್ಗೆ ಜಾಗರೂಕರಾಗಿರಲು ಪಕ್ಷದ ಕಾರ್ಯಕರ್ತರಿಗೆ ಸಲಹೆ ನೀಡಿದ್ದಾರೆ.

****************

ಸಾರ್ವಜನಿಕರನ್ನು ದಾರಿತಪ್ಪಿಸಲು ಆಯೋಗದ ಹೆಸರನ್ನು ದುರುಪಯೋಗಪಡಿಸಿಕೊಳ್ಳುವ ಎನ್‌ಜಿಒಗಳನ್ನು ಗುರುತಿಸುವಂತೆ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಕಾರ್ಯದರ್ಶಿಗಳು ಮತ್ತು ಪೊಲೀಸ್ ಮಹಾನಿರ್ದೇಶಕರಿಗೆ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ನೋಟಿಸ್ ಜಾರಿ ಮಾಡಿದೆ.

ಅದರಲ್ಲೂ ಮುಖ್ಯವಾಗಿ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಮತ್ತು ಪೊಲೀಸ್ ಮಹಾ ನಿರ್ದೇಶಕರಿಗೆ ರಾಜ್ಯದಲ್ಲಿ ಕಚೇರಿಯನ್ನು ಹೊಂದಿರುವ ಮತ್ತು ದೆಹಲಿಯಲ್ಲಿ ನೋಂದಾಯಿಸಲಾದ ಸರ್ಕಾರೇತರ ಸಂಸ್ಥೆ – ಎನ್‌ಜಿಒ ವಿರುದ್ಧ ತೆಗೆದುಕೊಂಡ ಕ್ರಮದ ಕುರಿತು ಎರಡು ವಾರಗಳಲ್ಲಿ ವರದಿ ಸಲ್ಲಿಸುವಂತೆ ನಿರ್ದೇಶಿಸಿದೆ.

****************

ನಂದಿನಿ ಉತ್ಪನ್ನಗಳು ಸೇವನೆಗೆ ಅಸುರಕ್ಷಿತವೆಂದು ಬಿಂಬಿಸುವ ಹಾಗೂ ಕೆಲವು ನಂದಿನಿ ಉತ್ಪನ್ನಗಳ ವಿರುದ್ಧ ಆಧಾರರಹಿತ ಮತ್ತು ಸುಳ್ಳು ಆರೋಪಗಳನ್ನು ಸಾಮಾಜಿಕ ಮಾಧ್ಯಮಗಳಲ್ಲಿ ಮಾಡಲಾಗುತ್ತಿದೆ. ಇದು ಬಾಲ್ಯದಿಂದಲೇ ನಂದಿನಿ ಬ್ರ್ಯಾಂಡ್‌ನೊಂದಿಗೆ ಬೆಳೆದ ಕೋಟ್ಯಾಂತರ ಗ್ರಾಹಕರಲ್ಲಿ ಅನಗತ್ಯ ಭೀತಿ ಮತ್ತು ಗೊಂದಲವನ್ನು ಉಂಟುಮಾಡುತ್ತಿದೆ ಎಂದು ಕೆಎಂಎಫ್ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದೆ.
ಗ್ರಾಹಕರು ಆಧಾರರಹಿತ ಆರೋಪಗಳಿಂದ ಗೊಂದಲಕ್ಕೀಡಾಗದಂತೆ ಮನವಿ ಮಾಡಿದೆ. ನಂದಿನಿ ಹಾಲು ಹಾಗೂ ಹಾಲಿನ ಉತ್ಪನ್ನಗಳು ಸೇವನೆಗೆ ಸುರಕ್ಷಿತವೆಂದು ಭರವಸೆ ನೀಡಿದೆ.
ಭಾರತೀಯ ಆಹಾರ ಸುರಕ್ಷತಾ ಮಾನದಂಡಗಳನ್ನು ಕಟ್ಟುನಿಟ್ಟಾಗಿ ಪಾಲಿಸಲಾಗುತ್ತಿದೆ ಎಂದು ಕೆಎಂಎಫ್ ಸ್ಪಷ್ಟಪಡಿಸಿದೆ.

****************

ರಾಜ್ಯದ ಪಂಚ ಗ್ಯಾರಂಟಿ ಯೋಜನೆಗಳಿಗೆ ರಾಜ್ಯ ಸರ್ಕಾರ ಕಳೆದ ಎರಡೂ ಮುಕ್ಕಾಲು ವರ್ಷಗಳ ಅವಧಿಯಲ್ಲಿ 1.22 ಲಕ್ಷ ಕೋಟಿ ಹಣವನ್ನು ಬಿಡುಗಡೆ ಮಾಡಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಚಿಕ್ಕಬಳ್ಳಾಪುರದಲ್ಲಿ ತಿಳಿಸಿದ್ದಾರೆ.
ಈ ಕುರಿತು ಮಾಹಿತಿ ನೀಡಿರುವ ಅವರು, ಪಂಚ ಗ್ಯಾರಂಟಿ ಯೋಜನೆಗಳು ರಾಜ್ಯದ ಜನರಿಗೆ ವರದಾನವಾಗಿವೆ. ಗೃಹ ಲಕ್ಷ್ಮಿ ಯೋಜನೆಯಿಂದ ಮಹಿಳೆಯರ ಸಬಲೀಕರಣವಾಗುತ್ತಿದ್ದು, ಮಹಿಳೆಯರ ಖರೀದಿ ಸಾಮರ್ಥ್ಯ ಹೆಚ್ಚಾಗಿದೆ. ಗೃಹ

ಲಕ್ಷ್ಮಿ ಯೋಜನೆಗೆ ಈವರೆಗೆ 22 ಸಾವಿರ ಕೋಟಿ ವೆಚ್ಚ ಮಾಡಲಾಗಿದ್ದು, ಒಟ್ಟು ಗ್ಯಾರಂಟಿಗಳಿಗೆ 1.22 ಲಕ್ಷ ಕೋಟಿ ವೆಚ್ಚ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

****************

ಭಾರತದ ಪ್ರಮುಖ ಹುಲಿ ರಕ್ಷಿತಾರಣ್ಯಗಳಲ್ಲಿ ಒಂದಾದ ಗುಂಡ್ಲುಪೇಟೆ ತಾಲೂಕಿನ ಬಂಡೀಪುರದಲ್ಲಿ ವನ್ಯಜೀವಿ ಸಫಾರಿ ಪುನಾರಂಭಗೊಳಿಸುವ ಆದೇಶದ ವಿರುದ್ಧ ರೈತರು ಇಂದು ಪ್ರತಿಭಟನೆ ನಡೆಸಿದರು.
ಬಂಡೀಪುರದ ಮೇಲುಕಾಮನಹಳ್ಳಿ ಸಫಾರಿ ಕೇಂದ್ರದ ಆವರಣದಲ್ಲಿ ರೈತ ಮುಖಂಡರಾದ ಹೊನ್ನೂರು ಪ್ರಕಾಶ್, ರವಿ ಕಿರಣ್ ನೇತೃತ್ವದಲ್ಲಿ ಜಮಾಯಿಸಿದ 40 ಕ್ಕೂ ಅಧಿಕ ರೈತರು, ವನ್ಯಜೀವಿ ಸಂಘರ್ಷಕ್ಕೆ ಎಡೆ ಮಾಡಿಕೊಡುವ ಸಫಾರಿ ಬೇಡ ಎಂದು ಘೋಷಣೆ ಕೂಗಿದರು.
ಈ ವೇಳೆ ಪರಿಸ್ಥಿತಿಯನ್ನು ನಿಭಾಯಿಸಲು ಪೊಲೀಸರು ಪ್ರತಿಭಟನಾ ನಿರತ ರೈತರನ್ನು ಬಂಧಿಸಿ ಬಿಡುಗಡೆಗೊಳಿಸಿದರು.

****************

ಆನ್‌ಲೈನ್‌ನಲ್ಲಿ ಔಷಧ ವ್ಯಾಪಾರಕ್ಕೆ ಕಡಿವಾಣ ಹಾಕದೇ ಇದ್ದಲ್ಲಿ ಮಾದಕ ದ್ರವ್ಯ ತಡೆ ಸಾಧ್ಯವಾಗದು ಎಂದು ಕರ್ನಾಟಕ ಔಷಧ ವ್ಯಾಪಾರಸ್ಥರ ಸಂಘದ ಅಧ್ಯಕ್ಷ ಆರ್ ರಘುನಾಥ ರೆಡ್ಡಿ ತಿಳಿಸಿದ್ದಾರೆ.

ಮಡಿಕೇರಿಯಲ್ಲಿ ಕೊಡಗು ಔಷಧ ವ್ಯಾಪಾರಸ್ಥರ ಸಂಘದ ವತಿಯಿಂದ ನೂತನವಾಗಿ ನಿರ್ಮಿಸಲಾದ ಫಾರ್ಮಾ ಭವನ ಉದ್ಘಾಟಿಸಿ ಮಾತನಾಡಿದ ಅವರು, ಆನ್ ಲೈನ್ ಮೂಲಕ ಮಾದಕ ದ್ರವ್ಯ ಸಾಗಾಣಿಕೆ ಊಹೆಗೂ ಮೀರಿ ಬೆಳೆಯುವ ಅಪಾಯವಿದೆ ಎಂದು ಎಚ್ಚರಿಸಿದ್ದಾರೆ.

ಸಂಘದ ಅಧೀನದಲ್ಲಿರುವ ಔಷಧ ವ್ಯಾಪಾರಿಗಳು ಮಾದಕ ಪದಾರ್ಥಗಳು, ಮಾದಕ ದ್ರವ್ಯಗಳ ಮಾರಾಟಕ್ಕೆ ಅವಕಾಶ ನೀಡಬಾರದೆಂದು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

****************

ಎಂಐಆರ್ ನೆಟ್ ಝೀರೋ ವಿಷನ್ 2047 ಸಮ್ಮೇಳನ ನಾಳೆ ಮಂಗಳೂರಿನ ಟಿಎಂಎ ಪೈ ಅಂತಾರಾಷ್ಟ್ರೀಯ ಕನ್ವೆನ್ಷನ್ ಸೆಂಟರ್‌ನಲ್ಲಿ ಆಯೋಜಿಸಲಾಗಿದೆ. ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಶಿ ಹಾಗೂ ಶ್ರೀಪಾದ್ ನಾಯಕ್, ರಾಜ್ಯ ಇಂಧನ ಸಚಿವ ಕೆ. ಜೆ. ಜಾರ್ಜ್, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ.
ಸಮ್ಮೇಳನದಲ್ಲಿ ಹಲವು ಅಧಿವೇಶನಗಳು ನಡೆಯಲಿವೆ. 'ರೋಮ್‌ನಿಂದ ನವದೆಹಲಿಯವರೆಗೆ: ಭಾರತದ ನಿವ್ವಳ ಶೂನ್ಯ ಆರ್ಥಿಕತೆಗಾಗಿ ಜಾಗತಿಕ ಹಸಿರು ಬಂಡವಾಳವನ್ನು ಸಜ್ಜುಗೊಳಿಸುವುದು' ವಿಷಯದ ಗೋಷ್ಠಿಯಲ್ಲಿ ನಿವೃತ್ತ ಐಎಎಸ್ ಅಧಿಕಾರಿ ಬಿ. ಲಕ್ಷ್ಮಿ ಕಾಂತಮ್ ಮತ್ತು ಆಂಬಿಟ್ ಗ್ಲೋಬಲ್ ಕ್ಯಾಪಿಟಲ್‌ನ ಕಾರ್ಯನಿರ್ವಾಹಕ ನಿರ್ದೇಶಕ ಸತೀಶ್ ನಾರಾಯಣನ್ ಪಾಲ್ಗೊಳ್ಳಲಿದ್ದಾರೆ.

****************

11 ವರ್ಷಗಳ ಬಳಿಕ ಕರ್ನಾಟಕ ತಂಡ ರಣಜಿ ಟೂರ್ನಿಯ ಫೈನಲ್ ಪ್ರವೇಶಿಸಿದೆ. ಲಕ್ನೋದ ಏಕಾನ ಕ್ರೀಡಾಂಗಣದಲ್ಲಿ ನಡೆದ ಉತ್ತರಾಖಂಡ್ ಮತ್ತು ಕರ್ನಾಟಕ ನಡುವಿನ ಸೆಮಿಫೈನಲ್ ಪಂದ್ಯವು ಡ್ರಾನಲ್ಲಿ ಅಂತ್ಯಗೊಂಡಿದೆ. ಈ ಪಂದ್ಯವು ಡ್ರಾನಲ್ಲಿ ಕೊನೆಗೊಂಡರೂ ಮೊದಲ ಇನಿಂಗ್ಸ್‌ನಲ್ಲಿನ 503 ರನ್‌ಗಳ ಮುನ್ನಡೆಯ ಆಧಾರದ ಮೇಲೆ ಕರ್ನಾಟಕ ತಂಡ ಫೈನಲ್ ಪ್ರವೇಶಿಸಿದೆ.
ಮೊದಲ ಇನಿಂಗ್ಸ್ ಹಿನ್ನಡೆಯೊಂದಿಗೆ ದ್ವಿತೀಯ ಇನಿಂಗ್ಸ್‌ನಲ್ಲಿ 827 ರನ್‌ಗಳ ಗುರಿ ಪಡೆದ ಉತ್ತರಾಖಂಡ್ 5ನೇ ದಿನದಾಟದ ಅಂತ್ಯಕ್ಕೆ ಕಲೆಹಾಕಿದ್ದು 260 ರನ್‌ಗಳು ಮಾತ್ರ. ಇದರೊಂದಿಗೆ ಕರ್ನಾಟಕ–ಉತ್ತರಾಖಂಡ್ ನಡುವಣ ಸೆಮಿಫೈನಲ್ ಪಂದ್ಯ ಡ್ರಾನಲ್ಲಿ ಅಂತ್ಯಗೊಂಡಿದೆ.
ಮೊದಲ ಇನಿಂಗ್ಸ್‌ನಲ್ಲಿನ ಮುನ್ನಡೆಯ ಆಧಾರದ ಮೇಲೆ ಕರ್ನಾಟಕ ತಂಡವು ಫೈನಲ್‌ಗೆ ಅರ್ಹತೆ ಪಡೆದುಕೊಂಡಿದೆ. ಇದೇ 24 ರಿಂದ ಆರಂಭವಾಗಲಿರುವ ಫೈನಲ್ ಪಂದ್ಯದಲ್ಲಿ ಕರ್ನಾಟಕ ಮತ್ತು ಜಮ್ಮು–ಕಾಶ್ಮೀರ ತಂಡಗಳು ಮುಖಾಮುಖಿಯಾಗಲಿವೆ.

****************

ಇದೇ 28ರಿಂದ ಮಾರ್ಚ್ 17 ರವರೆಗೆ ನಡೆಯಲಿರುವ ದ್ವಿತೀಯ ಪಿಯುಸಿ ಪರೀಕ್ಷೆಗೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಕಲ ಸಿದ್ಧತೆ ಮಾಡಲಾಗುತ್ತಿದೆ. ಜಿಲ್ಲೆಯಲ್ಲಿ ಈ ಬಾರಿ ಒಟ್ಟು 37,337 ಮಂದಿ ದ್ವಿತೀಯ ಪಿಯುಸಿ ಪರೀಕ್ಷೆ ಬರೆಯಲಿದ್ದಾರೆ ಎಂದು ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ದರ್ಶನ್ ಎಚ್.ವಿ. ತಿಳಿಸಿದ್ದಾರೆ.

********ಮುಕ್ತಾಯ********